ಕರ್ನಾಟಕ ಗೃಹ ಮಂಡಳಿ ವತಿಯಿಂದ ನಿವೇಶನಗಳ ಹಂಚಿಕೆ

36(158): ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ಗೃಹ ಮಂಡಳಿಯವರು ಡಾಬಸ್‌ಪೇಟೆಯ ಬಳಿ ನಿವೇಶನ ಹಂಚಿಕೆ ಮಾಡಲು 2009ರಲ್ಲಿ ಸಾವಿರಾರು ಗ್ರಾಹಕರುಗಳಿಗೆ ಬ್ಯಾಂಕ್ ಮೂಲಕ ಹಣ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಎಷ್ಟು ಗ್ರಾಹಕರು ಅರ್ಜಿ ಸಲ್ಲಿಸಿರುತ್ತಾರೆ ಹಾಗೂ ಹಣ ಪಾವತಿಸಿದ ಗ್ರಾಹಕರುಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆಯೇ?

ಇ) ಹಾಗಿದ್ದಲ್ಲಿ, ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಹಾಗೂ ಇನ್ನೂ ಎಷ್ಟು ಗ್ರಾಹಕರುಗಳಿಗೆ ಹಂಚಿಕೆ ಮಾಡಲು ಬಾಕಿ ಉಳಿದಿರುತ್ತದೆ?

ಈ) ಹಂಚಿಕೆ ಮಾಡದಿದ್ದರೆ ಯಾವ ಕಾಲಮಿತಿಯಲ್ಲಿ ಹಂಚಿಕೆ ಮಾಡಲಾಗುವುದು?

ಉ) ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು):

ಅ) ಹೌದು ಡಾಬಸ್‌ಪೇಟೆಯ ಬಳಿ ತ್ಯಾಮಗೊಂಡ್ಲು ಗ್ರಾಮದಲ್ಲಿ ನಿವೇಶನಾಕಾಂಕ್ಷಿಗಳ ಬೇಡಿಕೆ, ಸಮೀಕ್ಷೆ ಮಾಡಲಾಗಿದ್ದು ಅವರುಗಳಿಂದ ನೋಂದಣಿ ಶುಲ್ಕ ಪಡೆಯಲಾಗಿದೆ

ಆ,ಇ,ಈ,ಉ) ಒಟ್ಟು 8,645 ಗ್ರಾಹಕರು ನೋಂದಣಿ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಿರುತ್ತಾರೆ. ಇದುವರೆವಿಗೂ ಯಾವುದೇ ನಿವೇಶನ ಹಂಚಿಕೆ ಮಾಡಿರುವುದಿಲ್ಲ. ಆದರೆ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತಿದ್ದು, ಭೂ ಸ್ವಾಧೀನದ ನಂತರ ಬಡಾವಣೆ ಅಭಿವೃದ್ಧಿಪಡಿಸಿ ನಿವೇಶನಗಳ ಹಂಚಿಕೆಗೆ ಕ್ರಮ ವಹಿಸಲಾಗುವುದು.

ಬಿ.ಬಿ.ಎಂ.ಪಿ. ಯಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಬಗ್ಗೆ

37(153): ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ತೋಟಗಾರಿಕೆ ವಿಭಾಗದಲ್ಲಿ ಎಷ್ಟು ಜನ ಅಧಿಕಾರಿಗಳು ಜಂಟಿ ತೋಟಗಾರಿಕೆ ನಿರ್ದೇಶಕರಾಗಿ ಕೆಲಸ ಮಾಡುತ್ತಿದ್ದಾರೆ?

ಆ) ಇವರುಗಳು ಎಷ್ಟು ವರ್ಷಗಳಿಂದ ಬಿಬಿಎಂಪಿಯಲ್ಲಿ ಎರವಲು/ನಿಯೋಜನೆ ಸೇವೆ ಮೇಲೆ ಯಾವ ಹುದ್ದೆಗಳಲ್ಲಿ ಕೆಲಸ ಮಾಡಿದ್ದಾರೆ?

ಇ) ಬಿ.ಬಿ.ಎಂ.ಪಿ. ನಿಯಮಗಳಲ್ಲಿ ಹತ್ತಾರು ವರ್ಷಗಳಿಂದ ನಿಯೋಜನೆ ಮೇಲೆ ಕಾರ್ಯನಿರ್ವಹಿಸಲು ನಿಯಮಗಳಲ್ಲಿ ಅವಕಾಶಗಳಿವೆಯೇ?

ಈ) ತೋಟಗಾರಿಕೆ ಜಂಟಿ ನಿರ್ದೇಶಕರ ವಿರುದ್ಧ ಹಲವಾರು ಸಾರ್ವಜನಿಕ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) ಇವರುಗಳು ಹತ್ತಾರು ವರ್ಷಗಳಿಂದ ನಿಯಮ ಬಾಹಿರವಾಗಿ ಬಿ.ಬಿ.ಎಂ.ಪಿ.ಯಲ್ಲೇ ಎರವಲು ನಿಯೋಜನೆ ಮೇಲೆ ಕಾರ್ಯ ನಿರ್ವಹಿಸುತ್ತಿದ್ದು ಆಡಳಿತ ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ಇಂತಹ ಅಧಿಕಾರಿಗಳ ಸೇವೆಯನ್ನು ಮಾತೃ ಇಲಾಖೆಗೆ ಹಿಂತಿರುಗಿಸಲು ಸರ್ಕಾರದ ಮುಂದಿರುವ ಕ್ರಮಗಳೇನು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು):

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಒಬ್ಬರು ಜಂಟಿ ನಿರ್ದೇಶಕರು (ತೋಟಗಾರಿಕೆ) ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ.

ಆ) 2004 ರಿಂದ 2007 ರವರೆಗೆ ಮುಖ್ಯ ತೋಟಗಾರಿಕೆ ಅಧಿಕಾರಿಯಾಗಿ ಹಾಗೂ 2008 ರಿಂದ ಇಲ್ಲಿಯವರೆಗೆ ಜಂಟಿ ನಿರ್ದೇಶಕರು (ತೋಟಗಾರಿಕೆ) ಆಗಿ ಕಾರ್ಯ ನಿರ್ವಹಿಸಿರುತ್ತಾರೆ.

ಇ) ಕೆ.ಸಿ.ಎಸ್.ಆರ್. ನಿಯಮ 419 ರಂತೆ ಕನಿಷ್ಠ 3 ವರ್ಷ ಹಾಗೂ ಗರಿಷ್ಠ 5 ವರ್ಷಗಳವರೆಗೆ ಎರವಲು ಸೇವೆಯ ಮೇಲೆ ಕಾರ್ಯ ನಿರ್ವಹಿಸಲು ಅವಕಾಶವಿರುತ್ತದೆ. ಎರವಲು ಸೇವಾ ಅವಧಿ ಮುಗಿದ ಪ್ರಕರಣಗಳಲ್ಲಿ ಸರ್ಕಾರದ ಅನುಮೋದನೆಯೊಂದಿಗೆ ಪಾಲಿಕೆಯಲ್ಲಿ ಮುಂದುವರೆಸಲಾಗುತ್ತಿರುತ್ತದೆ.

ಈ) ಇಲ್ಲ.

ಉ) ಜಂಟಿ ನಿರ್ದೇಶಕರು (ತೋಟಗಾರಿಕಾ) ಹುದ್ದೆಯಲ್ಲಿ 10 ವರ್ಷಗಳಿಂದ ನಿಯಮಬಾಹಿರವಾಗಿ ಕಾರ್ಯ ನಿರ್ವಹಿಸಿರುವವರು ಯಾರು ಇರುವುದಿಲ್ಲ.

ಪ್ರವಾಸಿ ತಾಣಗಳ ಅಭಿವೃದ್ಧಿ

40(157) ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ): ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಯಾವ ಯಾವ ಸ್ಥಳಗಳನ್ನು ಪ್ರವಾಸಿ ತಾಣವೆಂದು ಗುರುತಿಸಲಾಗಿದೆ?

ಆ) ಈ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಕಳೆದ ಎರಡೂವರೆ ವರ್ಷಗಳಿಂದ ಇಲ್ಲಿಯವರೆಗೆ ಪ್ರತಿ ವರ್ಷ ವೆಚ್ಚ ಮಾಡಲಾದ ಹಣವೆಷ್ಟು? ಈ ಪೈಕಿ ರಾಜ್ಯ ಸರ್ಕಾರದ ಹಣವೆಷ್ಟು? ಹಾಗೂ ಕೇಂದ್ರ ಸರ್ಕಾರದ ಹಣವೆಷ್ಟು?

ಇ) ಈ ಮತಕ್ಷೇತ್ರದ ಯಾವ ಯಾವ ಪ್ರವಾಸಿ ಸ್ಥಳಗಳನ್ನು ಕೇಂದ್ರ ಸರ್ಕಾರದ ನೆರವಿನಿಂದ ಅಭಿವೃದ್ಧಿಗೊಳಿಸಲಾಗುವುದು ಈ ಪೈಕಿ ಎಷ್ಟು ಪ್ರಸ್ತಾವನೆಗಳು ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಮಂತ್ರಾಲಯದಲ್ಲಿ ಎಷ್ಟು ದಿನಗಳಿಂದ ಬಾಕಿ ಇವೆ ಹಾಗೂ ಈ ಪ್ರವಾಸಿ ಸ್ಥಳಗಳ ಅಭಿವೃದ್ಧಿಗೆ ತಗಲುವ ವೆಚ್ಚವೆಷ್ಟು?

ಈ) ಕೇಂದ್ರ ಸರ್ಕಾರದ ಮುಂದೆ ಬಾಕಿ ಇರುವ ಈ ಪ್ರಸ್ತಾವನೆಗಳಿಗೆ ಒಪ್ಪಿಗೆ ಪಡೆದುಕೊಳ್ಳಲು ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ಹಾಗೂ ಈ ಬಗ್ಗೆ ಕೇಂದ್ರದೊಂದಿಗೆ ಎಷ್ಟು ಪತ್ರ ವ್ಯವಹಾರಗಳನ್ನು ನಡೆಸಿದೆ? (ಈ ಪತ್ರಗಳ ಪ್ರತಿ ಒದಗಿಸುವುದು):

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರು):

ಅ) ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಬಸವಕಲ್ಯಾಣ ಪಟ್ಟಣ ಹಾಗೂ ನಾರಾಯಣ ಪುರ ಅಣೆಕಟ್ಟು ಪ್ರದೇಶಗಳನ್ನು ಪ್ರಮುಖ ಪ್ರವಾಸಿ ತಾಣಗಳೆಂದು ಗುರುತಿಸಲಾಗಿದೆ.

ಆ) ಈ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಕಳೆದ ಎರಡೂವರೆ ವರ್ಷಗಳಿಂದ ಕೇಂದ್ರ ಹಾಗೂ ರಾಜ್ಯದ ಹಣ ವೆಚ್ಚ ಮಾಡಿರುವುದಿಲ್ಲ.